**<u>ಅಸಲು ದಾವಾ ಸಂಖ್ಯೆ - 205/21</u>** **ಪಿ.ಡಬ್ಲ್ಯೂ:-1**

ದಿನಾಂಕಃ **14.10.2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

**1** ನೇ ಪ್ರತಿವಾದಿ ನನಗೆ ತಮ್ಮನಾಗಬೇಕು. **2** ನೇ ಪ್ರತಿವಾದಿ ನನ್ನ ತಮ್ಮನ ಮಗ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತು. ನನಗೆ ಕನ್ನಡ ಓದಲು ಬರೆಯಲು ಬರುತ್ತದೆ. ಆಂಗ್ಲ ಭಾಷೆಯಲ್ಲಿ ಸ್ವಲ್ಪಮಟ್ಟಿಗೆ ಓದಲು ಬರೆಯಲು ಬರುತ್ತದೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನಮೂದು ಮಾಡಿರುವಂತೆ **12 X 27** ಅಡಿಯಲ್ಲಿ ಕೆಂಪು ಹಂಚಿನ ಮನೆ **12** ವರ್ಷಗಳ ಹಿಂದೆ ಇತ್ತು ಈಗ ಇರುವುದಿಲ್ಲ. ಪ್ರತಿವಾದಿ ವಾಸವಾಗಿರುವ ಮನೆಯಿಂದ ಸುಮಾರು **150** ಅಡಿ ದೂರದಲ್ಲಿ ನಾನು ವಾಸವಾಗಿದ್ದೇನೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು **12** ವರ್ಷಗಳ ಹಿಂದೆ ಪ್ರತಿವಾದಿಯ ಮನೆಯ ಪಕ್ಕದಲ್ಲಿ ವಾಸವಾಗಿದೆ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ಈಗೇ ಸುಮಾರು **3-4** ವರ್ಷಗಳಿಂದ ತೊಂದರೆಯನ್ನು ಕೊಡುತ್ತಿದ್ದಾರೆ ಆದರೆ ನಿರ್ದಿಷ್ಟವಾದ ದಿನಾಂಕ ನನಗೆ ನೆನಪಿಲ್ಲ. ದಾವಾ ಆಸ್ತಿಯಲ್ಲಿ ನಾನು ಸ್ವಾಧೀನಾನುಭವದಲ್ಲಿ ಇಲ್ಲ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.